ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	714
ಸದಸ್ಯರ ಹೆಸರು	:	ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.
ಉತ್ತರಿಸಬೇಕಾದ ದಿನಾಂಕ:	:	5-3-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ಕೇಂದ್ರ ಸರ್ಕಾರದ ಯೋಜನೆಯಂತೆ 0-14 ವಯೋಮಿತಿ ಯಲ್ಲಿರುವ ಮಕ್ಕಳಿಗೆ ಅಪೌಷ್ಠಿಕತೆ ಸುರಕ್ಷಾ ಯೋಜನೆ ಅಡಿಯಲ್ಲಿ ಪೌಷ್ಠಿಕ ಆಹಾರವನ್ನು ಒದಗಿಸುವ ಕಾರ್ಯಕ್ರಮ ಜಾರಿಯಲ್ಲಿದೆಯೇ: (ವಿವರ ನೀಡುವುದು).	ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ರೂ. 8.00 ರ ಘಟಕ ವೆಚ್ಚದಲ್ಲಿ **'ಪುಷ್ಟಿ ನ್ಯೂಟ್ರಿಮಿಕ್ಸ್'** ಪೂರಕ ಪೌಷ್ಠಿಕ ಆಹಾರವನ್ನು ಮನೆಗೆ ವಿತರಿಸಲಾಗುತ್ತಿದೆ. 3 ರಿಂದ 6 ವರ್ಷದ ಮಕ್ಕಳಿಗೆ ಸ್ಥಳೀಯ ಮೆನುವಿಗೆ ಅನುಗುಣವಾಗಿ ಜಿಲ್ಲಾ ಸಮಿತಿಯ ಅನುಮೋದನೆಯಂತೆ ರೂ.8.00 ರ ಘಟಕ ವೆಚ್ಚದಲ್ಲಿ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಕ್ಷೀರಭಾಗ್ಯ ಯೋಜನೆಯಡಿ ಅಂಗನವಾಡಿ ಕೇಂದ್ರದ ಮಕ್ಕಳಿಗೆ ವಾರದಲ್ಲಿ 5 ದಿನ ಕೆನೆಭರಿತ ಹಾಲನ್ನು ನೀಡಲಾಗುತ್ತಿದೆ. ಸೃಷ್ಟಿ ಯೋಜನೆಯಡಿ 3 ರಿಂದ 6 ವರ್ಷದ ಮಕ್ಕಳಿಗೆ ವಾರದಲ್ಲಿ 2 ದಿನ ಕೋಳಿ ಮೊಟ್ಟೆಯನ್ನು ವಿತರಿಸಲಾಗುತ್ತಿದೆ. ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಾಯಪೂರ್ವ ಬಾಲಕಿಯರ ಯೋಜನೆಯಡಿ ಶಾಲೆಯಿಂದ ಹೊರಗುಳಿದ 11 ರಿಂದ 14 ವರ್ಷದ ಪ್ರಾಯಪೂರ್ವ ಬಾಲಕಿಯರಿಗೆ ರೂ 9.50 ರ ಘಟಕ ವೆಚ್ಚದಲ್ಲಿ ಅಕ್ಕಿ, ಗೋಧಿ, ಹೆಸರುಕಾಳು, ಬೆಲ್ಲವನ್ನು ಮನೆಗೆ ಕೊಂಡೊಯ್ಯುವ ಆಹಾರವಾಗಿ ಒದಗಿಸಲಾಗುತ್ತಿದೆ.
ಆ.	ಈ ಯೋಜನೆ ಅಡಿಯಲ್ಲಿ ಹೆಣ್ಣು ಮಗುವಿಗೆ ಪೌಷ್ಠಿಕ ಅಹಾರವನ್ನು ನೀಡಲು ವಿಶೇಷ ಕಾರ್ಯಕ್ರಮವನ್ನು ರೂಪಿಸಲಾಗಿದೆಯೇ? (ವಿವರ ನೀಡುವುದು).	ಪ್ರಾಯಪೂರ್ವ ಬಾಲಕಿಯರ ಯೋಜನೆಯಡಿ ಶಾಲೆಯಿಂದ ಹೊರಗುಳಿದ 11 ರಿಂದ 14 ವರ್ಷದ ಪ್ರಾಯಪೂರ್ವ ಬಾಲಕಿಯರಿಗೆ ರೂ.9.50 ರ ಘಟಕ ವೆಚ್ಚದಲ್ಲಿ ಅಗತ್ಯ ಪೌಷ್ಠಿಕ ಆಹಾರವನ್ನು ಮನೆಗೆ ನೀಡುವ ಕೇಂದ್ರ ಪುರಸ್ಕೃತ ಯೋಜನೆಯನ್ನು ರೂಪಿಸಲಾಗಿದೆ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 69 ಐಸಿಡಿ 2021